# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ಸಾಮಾಜಿಕ ಭದ್ರತಾ ಯೋಜನೆಗಳಿಗೆ ಸಂಬಂಧಿಸಿದಂತೆ ಆದಾಯ ಮಿತಿಯನ್ನು ನಿಗಧಿಗೊಳಿಸುವ ಕುರಿತು.

ಉಲ್ಲೇಖ : 1) ಸರ್ಕಾರಿ ಆದೇಶ ಸಂಖ್ಯೆ: ಕಂ.ಇ.85.ಡಿ.ಎಸ್.ಪಿ 2011, ದಿ:21.06.2011

2) ದಿನಾಂಕ: 25/11/2020ರಂದು ಮಾನ್ಯ ಕಂದಾಯ ಸಚಿವರ ಅಧ್ಯಕ್ಷತೆಯಲ್ಲಿ ನಡೆದಸಭೆ.

*****

ಸಾಮಾಜಿಕ ಭದ್ರತೆ ಮತ್ತು ಪಿಂಚಣಿ ನಿರ್ದೇಶನಾಲಯವು ಸರ್ಕಾರಿ ಆದೇಶ ಸಂಖ್ಯೆ : ಕಂ.ಇ.44/ಎಂ.ಎಸ್.ಟಿ/2007 ದಿನಾಂಕ: 08/05/2007ರಂತೆ ಅಸ್ತಿತ್ವಕ್ಕೆ ಬಂದಿದೆ. ನಿರ್ದೇಶನಾಲಯದ ಮುಖ್ಯ ಉದ್ದೇಶ ಸಾಮಾಜಿಕ ಭದ್ರತೆಗಳಿಗೆ ಸಂಬಂಧಪಟ್ಟ ಎಲ್ಲಾ ಯೋಜನೆಗಳನ್ನು ಅನುಷ್ಠಾನಗೊಳಿಸಿ, ಕಾಲಕಾಲಕ್ಕೆ ತಕ್ಕಂತೆ ಪರಿಣಾಮಕಾರಿಯಾಗಿ ಕೆಲಸಕಾರ್ಯಗಳನ್ನು ನಿರ್ವಹಿಸುವುದಾಗಿರುತ್ತದೆ. ಸದರಿ ಯೋಜನೆಯನ್ನು ಉತ್ತಮ ರೀತಿಯಲ್ಲಿ ಜಾರಿಗೆ ತರಲು ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯವನ್ನು ಕಂದಾಯ ಇಲಾಖೆಯಡಿ ಸೃಜಿಸಲಾಗಿದೆ. ಕರ್ನಾಟಕ ಸರ್ಕಾರವು ಅಸಹಾಯಕ, ಅಶಕ್ತವ್ಯಕ್ತಿಗಳಿಗಾಗಿ ಹಾಗೂ ನಿರ್ಗತಿಕ ವಿಧವೆಯರಿಗೆ ಮತ್ತು ಅಂಗವಿಕಲರಿಗೆ ಅನೇಕ ಸಾಮಾಜಿಕ ಭದ್ರತೆ ಯೋಜನೆಗಳನ್ನು ಕಂದಾಯ ಇಲಾಖೆಯ ಮೂಲಕ ಕಾರ್ಯಗತಗೊಳಿಸುತ್ತಿದೆ. ತಾಲ್ಲೂಕು ಮಟ್ಟದಲ್ಲಿ ತಹಸೀಲ್ದಾರರು ಈ ಯೋಜನೆಗಳಿಗೆ ಮಂಜೂರಾತಿ ಪ್ರಾಧಿಕಾರಿಗಳಾಗಿರುತ್ತಾರೆ.

ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯದಿಂದ 1) ಇಂದಿರಾಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ವೇತನ, 2) ವಿದವಾ ವೇತನ ಪಿಂಚಣಿ ಯೋಜನೆ, 3) ವಿಕಲಾಂಗ ಪಿಂಚಣಿ ಯೋಜನೆ, 4) ಸಂಧ್ಯಾ ಸುರಕ್ಷಾ ಯೋಜನೆ, 5) ಆದರ್ಶ ವಿವಾಹ ಯೋಜನೆ, 6) ರಾಷ್ಟ್ರೀಯ ಕುಟುಂಬ ನೆರವು ಯೋಜನೆ, 7) ಅಂತ್ಯ ಸಂಸ್ಕಾರ ಸಹಾಯಧನ ಯೋಜನೆ, 8) ಆಮ್ ಆದ್ಮಿ ಬೀಮಾ ಯೋಜನೆ, 9) ಮನಸ್ವಿನಿ ಯೋಜನೆ, 10) ಮೈತ್ರಿ ಯೋಜನೆ , 11) ಸಾಲಭಾದೆಯಿಂದ ಆತ್ಮಹತ್ಯೆ ಮಾಡಿಕೊಂಡ ರೈತ ಪತ್ನಿಗೆ ವಿಧವಾ ವೇತನ , 12) ಆಸಿಡ್ ದಾಳಿಗೆ ಒಳಗಾದ ಮಹಿಳೆಯರಿಗೆ ಪಿಂಚಣಿ ಯೋಜನೆ ಮತ್ತು 13) ಎಂಡೋಸಲ್ಫಾನ್ ಸಂತ್ರಸ್ತರಿಗೆ ಮಾಸಿಕ ಪಿಂಚಣಿ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ಮೇಲೆ ತಿಳಿಸಿದ ಯೋಜನೆಗಳ ಪೈಕಿ ಕ್ರ.ಸಂ.(11),(12) ಮತ್ತು (13)ರಲ್ಲಿ ತಿಳಿಸಿರುವ ಯೋಜನೆಗಳನ್ನು ಹೊರತು ಪಡಿಸಿ ಉಳಿದ ಎಲ್ಲಾ ಯೋಜನೆಗಳಡಿ ಬಡತನ ರೇಖೆಗಿಂತ ಕೆಳಗಿರುವ ಫಲಾನುಭವಿಗಳಿಗೆ ಸೌಲಭ್ಯವನ್ನುಒದಗಿಸಲಾಗುತ್ತಿದೆ.

ಮೇಲೆ ಓದಲಾದ 1)ರ ಸರ್ಕಾರಿ ಆದೇಶದಲ್ಲಿಆದಾಯ ಮಿತಿಯನ್ನು ಪರಿಷ್ಕರಿಸಿ, ಗ್ರಾಮೀಣ ಪ್ರದೇಶದಲ್ಲಿ ರೂ.12,000/- ಮತ್ತು ನಗರ ಪ್ರದೇಶದಲ್ಲಿ ರೂ.17,000/-ಗಳಿಗೆ ಹೆಚ್ಚಿಸಿ ನಿಗಧಿಪಡಿಸಲಾಗಿದೆ.

ಮೇಲೆ ಓದಲಾದ 2)ರ ಸಭೆಯಲ್ಲಿ ಆಹಾರ ಮತ್ತು ನಾಗರೀಕ ಇಲಾಖೆಯಿಂದ ಬಿ.ಪಿ.ಎಲ್. ಚೀಟಿ ನೀಡಲು ನಿಗಧಿ ಪಡಿಸಲಾಗಿದ್ದ ಆದಾಯ ಮಿತಿಯನ್ನೇ ಸಾಮಾಜಿಕ ಭದ್ರತಾ ಪಿಂಚಣಿ ಯೋಜನೆಗಳಿಗೆ ಚೀಟಿ ಪಡೆಯಲು ಆದಾಯ ಮಿತಿಯನ್ನು ರೂ.1.20 ಲಕ್ಷಕ್ಕೆ ಹೆಚ್ಚಿಸಲಾಗಿರುವ ವಿಷಯವನ್ನು ಚರ್ಚಿಸಿ , ತೀರ್ಮಾನಿಸಿ ದಂತೆ ಸರ್ಕಾರದಿಂದ ಆರ್ಥಿಕವಾಗಿ ಹಿಂದುಳಿದ ಕುಟುಂಬಗಳಿಗೆ ಪಿಂಚಣಿ ಸೌಲಭ್ಯವನ್ನು ಒದಗಿಸುವ ನೈಜ ಹಾಗೂ ವಸ್ತು ನಿಷ್ಠಸ್ವರೂಪವನ್ನಾಗಿಸುವಲ್ಲಿ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳಡಿ ಆದಾಯ ಮಿತಿಯನ್ನು ಈಗ ಇರುವ ರೂ.12,000/-ಗಳಿಂದ ರೂ.17,000/-ಗಳಿಂದ ವಾರ್ಷಿಕ ರೂ.32,000/- ಗಳಿಗೆ ನಿಗಧಿ ಪಡಿಸಬಹುದಾದ ವಿಷಯವನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರಿ ಆದೇಶ ಸಂಖ್ಯೆ: **DSSP / MISC -05 /2020,**
## ಬೆಂಗಳೂರು, ದಿನಾಂಕ:**10 ನೇ ಫೆಬ್ರುವರಿ 2021.**

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಸಾಮಾಜಿಕ ಭದ್ರತೆ ಮತ್ತು ಪಿಂಚಣಿ ನಿರ್ದೇಶನಾಲಯದಿಂದ ಜಾರಿಗೊಳಿಸಿತ್ತಿರುವ ಮಾಸಿಕ ಯೋಜನೆಗಳಾದ 1) ಇಂದಿರಾಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ವೇತನ, 2) ವಿಧವಾ ವೇತನ ಪಿಂಚಣಿ ಯೋಜನೆ, 3) ವಿಕಲಾಂಗ ಪಿಂಚಣಿ ಯೋಜನೆ, 4) ಸಂಧ್ಯಾ ಸುರಕ್ಷಾ ಯೋಜನೆ, 5) ಮನಸ್ವಿನಿ ಯೋಜನೆ, 6) ಮೈತ್ರಿ ಯೋಜನೆ , ಹಾಗೂ ಒಂದು ಬಾರಿ ಸೌಲಭ್ಯ

...........2

Scanned with CamSca

ನೀಡುವ ಯೋಜನೆಗಳಾದ ರಾಷ್ಟ್ರೀಯ ಕುಟುಂಬ ನೆರವು ಯೋಜನೆ ಮತ್ತು ಅಂತ್ಯ ಸಂಸ್ಕಾರ ಸಹಾಯಧನ ಯೋಜನೆಗಳಿಗೆ ಆದಾಯ ಮಿತಿಯನ್ನು ವಾರ್ಷಿಕ ರೂ.32,000/- ಗಳಿಗೆ ಹೆಚ್ಚಿಸಿ ಆದೇಶಿಸಿದೆ.

ಮುಂದುವರೆದು, ಆದರ್ಶ ವಿವಾಹ ಯೋಜನೆ ,ಆಮ್ ಆದ್ಮಿ ಬೀಮಾ ಯೋಜನೆ , ಸಾಲ ಬಾಧೆಯಿಂದ ಆತ್ಮಹತ್ಯೆ ಮಾಡಿಕೊಂಡ ರೈತ ಪತ್ನಿಗೆ ವಿಧವಾ ವೇತನ , ಆಸಿಡ್ ದಾಳಿಗೆ ಒಳಗಾದ ಮಹಿಳೆಯರಿಗೆ ಪಿಂಚಣಿ ಯೋಜನೆ ಮತ್ತು ಎಂಡೋಸಲ್ಫಾನ್ ಸಂತ್ರಸ್ತರಿಗೆ ಮಾಸಿಕ ವೇತನ ಯೋಜನೆಗಳಿಗೆ ಈ ಆದಾಯ ಮಿತಿ ಅನ್ವಯಿಸುವುದಿಲ್ಲ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ : ಎಫ್ ಡಿ 505 ವೆಚ್ಚ-7/2020,ದಿ:06.01.2021ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

10/2/2021
(ಜಯಲಕ್ಷ್ಮಿ)
ಸರ್ಕಾರದ ಉಪ ಕಾರ್ಯದರ್ಶಿ,
ಕಂದಾಯ ಇಲಾಖೆ,(ಸೇವೆಗಳು-3,
ಕೆ.ಎ.ಟಿ,ಭಾನಿ, ಭೂಸುಕೋ ಮತ್ತು
ಸ್ತಾ.ಭ ಮತ್ತು ಪಿಂಚಣಿ)

ಇವರಿಗೆ :
ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು, ಇವರಿಗೆ ಮುಂಗಡ ರಾಜ್ಯ ಪತ್ರದಲ್ಲಿ 50 ಪ್ರತಿಗಳನ್ನು ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು ಇವರಿಗೆ ಕಳುಹಿಸಿ ಕೊಡಲು ಕೋರಿದೆ.

ಪ್ರತಿ :

1. ಮಹಾಲೇಖಪಾಲರು (ಲೆಕ್ಕಪತ್ರ ಮತ್ತು ಲೆಕ್ಕ ತಪಾಸಣೆ),ಕರ್ನಾಟಕ, ಬೆಂಗಳೂರು
2. ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಇ-ಆಡಳಿತ ಇಲಾಖೆ, ಬಹುಮಹಡಿಕಟ್ಟಡ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯ ದರ್ಶಿಗಳು, ಕಂದಾಯಇಲಾಖೆ, ಬೆಂಗಳೂರು
5. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ(ಆಯವ್ಯಯ ಮತ್ತು ಸಂಪನ್ಮೂಲ), ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ(ವೆಚ್ಚ), ವಿಧಾನಸೌಧ, ಬೆಂಗಳೂರು
7. ನಿರ್ದೇಶಕರು, ಅಟಲ್ ಜೀ ಜನಸ್ನೇಹಿ ನಿರ್ದೇಶನಾಲಯ, ಕೆ.ಆರ್.ವೃತ್ತ, ಬೆಂಗಳೂರು
8. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ, ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ
9. ರಾಜ್ಯದ ಎಲ್ಲಾ ಉಪ ವಿಭಾಗಾಧಿಕಾರಿಗಳಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ
10. ರಾಜ್ಯದ ಎಲ್ಲಾ ತಹಸೀಲ್ದಾರರುಗಳಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ
11. ಹೆಚ್ಚುವರಿ ಪ್ರತಿ ಮತ್ತು ರಕ್ಷಾ ಕಡತ

Scanned with CamSca